ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) : –

ಅ) ಕಾರಂಜ ನೀರಾವರಿ ಯೋಜನೆಗೆ ಮಾತ್ರ ಕಾಡಾ ರಚಿಸುವ ಉದ್ದೇಶ ಇಲ್ಲ. ಆದರೆ, ಬೀದರ್ ಮತ್ತು ಗುಲ್ಬರ್ಗ ಜಿಲ್ಲೆಯ ನೀರಾವರಿ ಯೋಜನೆಗಳ ಬಗ್ಗೆ ಕಾಡಾ ಪ್ರಾಧಿಕಾರ ರಚಿಸುವ ಉದ್ದೇಶ ಇದೆ.

ಆ) ಯೋಜನೆಗಳು ಪೂರ್ಣಗೊಂಡು ನೀರಾವರಿ ಸೌಲಭ್ಯವನ್ನು ಒದಗಿಸಿದ ಮೇಲೆ ಕಾಡಾ ಪ್ರಾಧಿಕಾರ ರಚಿಸಲಾಗುವುದು. ಸಮರ್ಪಕ ನೀರು ವಿತರಣೆ, ಹೊಲಗಾಲುವೆ, ಡ್ರೈನೇಜ್, ವಾರಾಬಂದಿ ಮತ್ತು ಆಯಕಟ್ಟು ರಸ್ತೆ ಕಾರ್ಯಗಳನ್ನು ಕೈಗೆತ್ತಿಕೊಳ್ಳುವುದು?

ಇ) ಪ್ರಸ್ತುತದಲ್ಲಿ ಈ ಪ್ರಶ್ನೆ ಉದ್ಭವಿಸುವುದಿಲ್ಲ.

## ಬೀದರ್ ಜಿಲ್ಲೆಯ ಏತ ನೀರಾವರಿ ಸಂಖ್ಯೆ

995. - ಶ್ರೀ ಬಸವರಾಜ್ ಪಾಟೀಲ್ ಅಟ್ಟೂರ್ (ಬಸವಕಲ್ಯಾಣ) :– ಮಾನ್ಯ ಸಣ್ಣ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ–

ಅ) ಬೀದರ್ ಜಿಲ್ಲೆಯಲ್ಲಿ ಎಷ್ಟು ಏತ ನೀರಾವರಿ ಯೋಜನೆಗಳನ್ನು ಸರ್ಕಾರ ಪ್ರಾರಂಭಿಸಿದೆ; (ತಾಲ್ಲೂಕು ವಿವರ)

ಆ) ಬೀದರ್ ಜಿಲ್ಲೆ ಬರಗಾಲ ಪೀಡಿತ ಜಿಲ್ಲೆಯಾದುದರಿಂದ ಪ್ರಸ್ತುತ ವರ್ಷ ಏತ ನೀರಾವರಿ ಪ್ರಾರಂಭಿಸುವ ಇಚ್ಛೆ ಸರ್ಕಾರಕ್ಕಿದೆಯೇ ; ಇದ್ದರೆ ಎಷ್ಟು, ಎಂದಿನಿಂದ ಪ್ರಾರಂಭಿಸಲಾಗುವುದು?

ಶ್ರೀ ಕೆ.ಎಸ್. ಮಲ್ಲಿಕಾರ್ಜುನ ಪ್ರಸನ್ನ (ಸಣ್ಣ ನೀರಾವರಿ ರಾಜ್ಯ ಸಚಿವರು) –

ಅ) ಇಲ್ಲ.

ಆ) ಬೀದರ್ ಜಿಲ್ಲೆಯಲ್ಲಿ ಕೃಷ್ಣಾ ಜಲಾನಯನ ಏತ ನೀರಾವರಿ ನಿಗಮದ 1991–92ನೇ ಸಾಲಿನ ಕಾರ್ಯ ಯೋಜನೆಯಲ್ಲಿ 3 ಏತ ನೀರಾವರಿ ಯೋಜನೆಗಳನ್ನು ಕೈಗೆತ್ತಿಕೊಳ್ಳಲು ಉದ್ದೇಶಿಸಲಾಗಿದೆ. ಅವುಗಳ ಯೋಜನಾ ವರದಿಗಳನ್ನು ನಬಾರ್ಡ್ ಸೂತ್ರಕ್ಕೆ ತಯಾರಿಸಿ ಮಂಜೂರಾತಿ ಪಡೆದುಕೊಂಡು ಪ್ರಾರಂಭಿಸಲಾಗುವುದು.

## ನೆಲಮಂಗಲ - ತುಮಕೂರು ವಿಭಾಗದ ರಾಷ್ಟ್ರೀಯ ಹೆದ್ದಾರಿ ನಂ.4 ರ ರಸ್ತೆ ನಾಲ್ಕು ಪಥಗಳಾಗಿ ಪರಿವರ್ತನೆ.

18. ಶ್ರೀ ಎಸ್. ಶಫಿ ಅಹಮದ್ (ತುಮಕೂರು) :– ಮಾನ್ಯ ಲೋಕೋಪಯೋಗಿ ಸಚಿವರು ಈ ಕೆಳಕಂಡ ಪ್ರಶ್ನೆಗೆ ದಯವಿಟ್ಟು ಉತ್ತರಿಸುವರೆ –

ರಾಷ್ಟ್ರೀಯ ಹೆದ್ದಾರಿ ನಂ.4 ರ ನೆಲಮಂಗಲ - ತುಮಕೂರು ವಿಭಾಗದ ರಸ್ತೆಯನ್ನು ನಾಲ್ಕು ಪಥಗಳ ರಸ್ತೆಯನ್ನಾಗಿ ಪರಿವರ್ತಿಸುವ ಬಗ್ಗೆ ಸರ್ಕಾರ ಕೈಗೊಂಡ ಕ್ರಮ ಏನು? ಮತ್ತು ಅದು ಯಾವ ಹಂತದಲ್ಲಿ ಇದೆ?

ಶ್ರೀ ಜಿ.ಹೆಚ್. ಅಶ್ವತ್ಥ ರೆಡ್ಡಿ (ಲೋಕೋಪಯೋಗಿ ಸಚಿವರು) –

ರಾಷ್ಟ್ರೀಯ ಹೆದ್ದಾರಿ ನಂ.4ರ ನೆಲಮಂಗಲ - ತುಮಕೂರುವರೆಗೆ ನಾಲ್ಕು ಪಥಗಳ ರಸ್ತೆಯನ್ನಾಗಿ ಪರಿವರ್ತಿಸುವ ಪ್ರಸ್ತಾವನೆಯನ್ನು 8ನೇ ಪಂಚವಾರ್ಷಿಕ ಯೋಜನೆಯಲ್ಲಿ ಅಳವಡಿಸಿ ಕೇಂದ್ರ

ಸರ್ಕಾರಕ್ಕೆ ಕಳುಹಿಸಲಾಗಿದೆ. ಇದರ ಅಲೈನ್‌ಮೆಂಟ್ ಪ್ರಸ್ತಾವನೆಯನ್ನು ಕೇಂದ್ರ ಸರ್ಕಾರದ ಒಪ್ಪಿಗೆಗಾಗಿ ಕಳುಹಿಸಲಾಗಿದ್ದು ಅವರ ಒಪ್ಪಿಗೆಯನ್ನು ನಿರೀಕ್ಷಿಸಲಾಗುತ್ತಿದೆ.

**ಬಾಕಿ ಉಳಿದಿರುವ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್‌ನ ಹೊಸ ವಿಧೇಯಕ.**

47. ಶ್ರೀ ಎಸ್. ಷಫಿ ಅಹಮದ್ (ತುಮಕೂರು) :– ಮಾನ್ಯ ಗ್ರಾಮೀಣಾಭಿವೃದ್ಧಿ ಪಂಚಾಯತ್ ರಾಜ್ ಹಾಗೂ ಕಂದಾಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ–

ಅ) ಕಾರ್ಯರೂಪಗೊಳ್ಳದೆ ಬಾಕಿ ಉಳಿದಿರುವ ಗ್ರಾಮೀಣ ಅಭಿವೃದ್ಧಿ ಮತ್ತು ಪಂಚಾಯತ್ ರಾಜ್‌ನ ಹೊಸ ವಿಧೇಯಕವು ಯಾವ ಹಂತದಲ್ಲಿದೆ ಮತ್ತು ಯಾವಾಗ ಇದು ಕಾರ್ಯರೂಪಕ್ಕೆ ಬರುವುದು?

ಆ) ಸರ್ಕಾರವು ಕ್ಷೇತ್ರ ವಿಂಗಡಣೆಯ ಕಾರ್ಯದಲ್ಲಿ ಜಿಲ್ಲಾ ಪರಿಷತ್ ಮತ್ತು ಮಂಡಲ ಪಂಚಾಯಿತಿ ಮತ ಕ್ಷೇತ್ರಗಳನ್ನು ಗಣನೆಗೆ ತೆಗೆದುಕೊಂಡು ವಿಂಗಡಿಸುವುದೇ?

ಶ್ರೀ. ಎಂ. ಮಲ್ಲಿಕಾರ್ಜುನ ಖರ್ಗೆ (ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಹಾಗೂ ಕಂದಾಯ ಸಚಿವರು) :–

ಅ) ಈಗಿರುವ ಕಾಯಿದೆಯಲ್ಲಿನ ನಿಯಮಗಳನ್ನು ಕಾರ್ಯರೂಪಕ್ಕೆ ತರುವಾಗ ಹೊಂದಿದ ಅನುಭವದ ಆಧಾರದ ಮೇಲೆ ಮತ್ತು 72ನೇ ತಿದ್ದುಪಡಿ ಕಾಯಿದೆಯ ಮುಖ್ಯಾಂಶಗಳ ಹಿನ್ನೆಲೆಯಲ್ಲಿ ಹೊಸ ಕರ್ನಾಟಕ ಪಂಚಾಯತ್ ರಾಜ್ ಮಸೂದೆಯು ಕಾನೂನು ಇಲಾಖೆಯಲ್ಲಿ ಕೊನೆಯ ಹಂತದಲ್ಲಿದೆ. ಈ ಮಸೂದೆಯನ್ನು ರಾಜ್ಯದ ವಿಧಾನ ಮಂಡಲದ ಮುಂದೆ ಮಂಡಿಸಲಾಗುವುದು.

ಆ) ಹೌದು
ಹೊಸ ವಿಧೇಯಕದಲ್ಲಿ ತರಲಾಗುವ ನಿಯಮದಂತೆ ಕ್ರಮ ತೆಗೆದುಕೊಳ್ಳಲಾಗುವುದು.

**ಮಲಪ್ರಭ ಬಲದಂಡೆ ಕಾಲುವೆ ಪ್ರಾರಂಭ**

856. ಶ್ರೀ ಹೆಚ್. ವೈ. ಮೇಟಿ (ಗುಳ್ಯೆದಗುಡ್ಡ) :– ಮಾನ್ಯ ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ –

ಅ) ಮಲಪ್ರಭಾ ಬಲದಂಡೆ ಕಾಲುವೆಯ ಯೋಜನೆಯನ್ನು ಪ್ರಾರಂಭಿಸುವ ಉದ್ದೇಶ ಸರ್ಕಾರಕ್ಕಿದೆಯೆ;

ಆ) ಹಾಗಿದ್ದಲ್ಲಿ, ಎಂದಿನಿಂದ ಪ್ರಾರಂಭಿಸಲಾಗುವುದು;

ಇ) ಇದರ ಅಂದಾಜು ವೆಚ್ಚವೆಷ್ಟು?

ಶ್ರೀ ಮಲ್ಲಾರಿಗೌಡ ಎಸ್. ಪಾಟೀಲ್ (ಭಾರಿ ಮತ್ತು ಮಧ್ಯಮ ನೀರಾವರಿ ಸಚಿವರು) :–

ಅ) ಮಲಪ್ರಭಾ ಬಲದಂಡೆ ಕಾಲುವೆ ಕಾಮಗಾರಿಗಳು ಈಗಾಗಲೇ ಪ್ರಗತಿಯಲ್ಲಿವೆ.

ಆ) ಉದ್ಭವಿಸುವುದಿಲ್ಲ.

ಇ) 183.74 ಕೋಟಿ ರೂ. ಗಳು (1987 – 88 ರ ದರಗಳ ಪ್ರಕಾರ)